# ಕರ್ನಾಟಕ ಸರ್ಕಾರ
# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು
**ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003**

**ಸಂಖ್ಯೆ: ಕ್ಯೂ5/ಕೆ.ಓ.ಎಸ್/ಪರೀಕ್ಷೆ/ಡಿಸೆಂಬರ್ 2020/ಫಲಿತಾಂಶ/40/2020-21** **ದಿನಾಂಕ:01//02/2021**

**ಸುತ್ತೋಲೆ**

**ವಿಷಯ:** ಡಿಸೆಂಬರ್ 2020ರ ಮಾಹೆಯಲ್ಲಿ ನಡೆದ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ಡಿಸೆಂಬರ್ 2020ರ ಮಾಹೆಯಲ್ಲಿ ನಡೆದ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಪೂರಕ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ:01/02/2021ರಂದು ಮಧ್ಯಾಹ್ನ 3:00 ಗಂಟೆಗೆ ಮಂಡಳಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು. ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳು ದಿನಾಂಕ: 02/02/2021 ರ ಬೆಳಿಗ್ಗೆ 11:00 ಗಂಟೆಗೆ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಕಲಿಕಾ ಕೇಂದ್ರಗಳ ಸೂಚನಾ ಫಲಕದಲ್ಲಿ ಫಲಿತಾಂಶ ಪ್ರಕಟಿಸುವುದು. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. ವಿಶೇಷ ಪರಿಸ್ಥಿತಿಯಲ್ಲಿ ಅಂದರೆ ಪರೀಕ್ಷೆಯ ದುರಾಚರಣೆ, ವಂಚನೆ, ಅನುಚಿತ ವರ್ತನೆ ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

**ಡಿಸೆಂಬರ್-2020ರ ಕೆ.ಓ.ಎಸ್ ಪೂರಕ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು, ಈ ಕೆಳಕಂಡ ಅಂಶಗಳ ಆಧಾರದ ಮೇಲೆ ನಿಮ್ಮ ಸಂಸ್ಥೆಯ ಎಲ್ಲಾ ಅಭ್ಯರ್ಥಿಗಳ ಫಲಿತಾಂಶವನ್ನು ಮತ್ತು ಇತರೆ ಅಂಶಗಳನ್ನು ಕಡ್ಡಾಯವಾಗಿ ಪರಿಶೀಲಿಸಲು ತಿಳಿಸಿದೆ.**

- ಡಿಸೆಂಬರ್-2020ರ ಕೆ.ಓ.ಎಸ್ ಪೂರಕ ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶ ಬಂದಿದೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳುವುದು.
- ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ, ಫಲಿತಾಂಶ ಪ್ರಕಟಿಸಿದ 10 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ. ಫಲಿತಾಂಶ ಪ್ರಕಟಣೆಯಾಗಿ ಹತ್ತು ದಿನಗಳ ನಂತರ ಈ ಬಗ್ಗೆ ಯಾವುದೇ ಕೋರಿಕೆ ಬಂದಲ್ಲಿ ಅದನ್ನು ಸ್ವೀಕರಿಸಲಾಗುವುದಿಲ್ಲ. ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಮುಖ್ಯಸ್ಥರೇ ಜವಾಬ್ದಾರರಾಗಿರುತ್ತಾರೆ.
- ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಶಾಲಾ ದಾಖಲೆಗಳೊಂದಿಗೆ ಶಾಲಾ ಮುಖ್ಯಸ್ಥರು ದೃಢೀಕರಿಸಿ ಹಾಗೂ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ಸಹಿಯೊಂದಿಗೆ **ರೂ.200/- ದಂಡಶುಲ್ಕವನ್ನು** ಮಂಡಳಿಗೆ ಪಾವತಿಸಲಾಗಿರುವ Neft Challan ಮೂಲ ಪ್ರತಿಯೊಂದಿಗೆ ಸಲ್ಲಿಸತಕ್ಕದ್ದು.

➢ ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ವಿದ್ಯಾರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ಕಲಿಕಾ ಕೇಂದ್ರಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

**ಸದರಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾ ಪ್ರತಿಗಾಗಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್ ಲೈನ್ ಮೂಲಕ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.**

| ವಿವರ | ದಿನಾಂಕ |
|---|---|
| ಡಿಸೆಂಬರ್ 2020ರ ಕೆ.ಓ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 02/02/2021 |
| ಡಿಸೆಂಬರ್ 2020ರ ಕೆ.ಓ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 10/02/2021 |
| ಡಿಸೆಂಬರ್ 2020ರ ಕೆ.ಓ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 03/02/2021 |
| ಡಿಸೆಂಬರ್ 2020ರ ಕೆ.ಓ.ಎಸ್ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ ಅಂಕಗಳ ಮರು ಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 12/02/2021 |

- **ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ www.sslc.karnataka.gov.in ಇಲ್ಲಿ ಅವಕಾಶ ಕಲ್ಪಿಸಲಾಗಿದೆ.**
- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗಧಿತ ಶುಲ್ಕವನ್ನು ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ಇಂಟರ್‌ನೆಟ್ ಬ್ಯಾಂಕಿಗ್ ಮೂಲಕ ಪಾವತಿಸಬಹುದಾಗಿದೆ.

| ಶುಲ್ಕದ ವಿವರ | |
|---|---|
| **ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ** | **ರೂ. 500/-** |
| **ಮರುಮೌಲ್ಯಮಾಪನಕ್ಕೆ ಶುಲ್ಕ ಒಂದು ವಿಷಯಕ್ಕೆ** | **ರೂ. 800/-** |
| **ಉತ್ತರ ಪತ್ರಿಕೆಗಳ ಅಂಕಗಳ ಮರುಎಣಿಕೆಗಾಗಿ (ಒಂದು ವಿಷಯಕ್ಕೆ)** | **ರೂ.150/-** |

- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಉತ್ತರ ಪತ್ರಿಕೆಗಳ ಪ್ರತಿಯನ್ನು ಸ್ಕ್ಯಾನ್‌ಮಾಡಿ ಮಂಡಳಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗುವುದು. ಇದಕ್ಕೆ ಸಂಬಂಧಿಸಿದ ಮಾಹಿತಿಯನ್ನು ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಮೊಬೈಲ್‌ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ತಿಳಿಸಲಾಗುವುದು. ಸದರಿ ಮಾಹಿತಿ ಸ್ವೀಕೃತವಾದ ನಂತರ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಸ್ಕ್ಯಾನ್ ಪ್ರತಿಯನ್ನು ಮಂಡಳಿಯ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

- ಉತ್ತರ ಪತ್ರಿಕೆಗಳ ಮರು ಎಣಿಕೆ/ಮರುಮೌಲ್ಯಮಾಪನ ಸೇವೆಯನ್ನು ಪಡೆಯಬೇಕಾದಲ್ಲಿ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಕಡ್ಡಾಯವಾಗಿ ಪಡೆಯಬೇಕಾಗುತ್ತದೆ.
- ಅಭ್ಯರ್ಥಿಯು ನೇರವಾಗಿ ಮರುಎಣಿಕೆಗೆ ಅರ್ಜಿ ಸಲ್ಲಿಸುವಂತಿಲ್ಲ. ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಆನ್‌ಲೈನ್ ಮೂಲಕ ಮರುಎಣಿಕೆಗೆ ನಿಗಧಿತ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಬೇಕಾಗುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮರುಎಣಿಕೆಯ ನಂತರದ ಅಂಕಗಳನ್ನು ಮಂಡಳಿಯಿಂದ ಅಭ್ಯರ್ಥಿಗಳ ಮೊಬೈಲ್‌ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ತಿಳಿಸಲಾಗುವುದು. **ಮರುಎಣಿಕೆಯ ನಂತರ ಫಲಿತಾಂಶದ ಅಂಕಗಳು ಹೆಚ್ಚಾದಲ್ಲಿ ಅಭ್ಯರ್ಥಿಗಳು ಮರುಎಣಿಕೆಗೆ ಪಾವತಿಸಿರುವ ಶುಲ್ಕವನ್ನು ಹಿಂದಿರುಗಿಸಲಾಗುವುದು.**
- ಅಭ್ಯರ್ಥಿಗಳು ಮಂಡಳಿಯ ಜಾಲತಾಣದ ಮೂಲಕ ಮರುಮೌಲ್ಯಮಾಪನಕ್ಕೆ ನಿಗಧಿತ ಶುಲ್ಕದೊಂದಿಗೆ ಅರ್ಜಿ ಸಲ್ಲಿಸ ಬಹುದು. ಮರುಮೌಲ್ಯಮಾಪನದ ನಂತರ ಅಭ್ಯರ್ಥಿಪಡೆದ ಅಂಕಗಳನ್ನು ಮಂಡಳಿಯಿಂದ ಅಭ್ಯರ್ಥಿಯ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ತಿಳಿಸಲಾಗುವುದು. **ಮರುಮೌಲ್ಯಮಾಪನದ ನಂತರ ಫಲಿತಾಂಶದಲ್ಲಿ 06 ಅಂಕಗಳಿಗಿಂತ ಹೆಚ್ಚು ಅಂಕಗಳು ಬಂದಲ್ಲಿ ಅಭ್ಯರ್ಥಿಗಳು ಪಾವತಿಸಿರುವ ಮರುಮೌಲ್ಯಮಾಪನದ ಶುಲ್ಕವನ್ನು ಹಿಂದಿರುಗಿಸಲಾಗುವುದು.**
- **ಆನ್‌ಲೈನ್‌ನಲ್ಲಿ ಉತ್ತರಪತ್ರಿಕೆಗಳ ಛಾಯಾಪ್ರತಿ/ಮರುಎಣಿಕೆ/ಮರುಮೌಲ್ಯಮಾಪನಕ್ಕೆ ಅರ್ಜಿಸಲ್ಲಿಸುವ ಸಂಬಂಧ ಮಂಡಳಿಯ ಜಾಲತಾಣದಲ್ಲಿ ಫ್ಲೋಚಾರ್ಟ್ ಅನ್ನು ಲಭ್ಯಮಾಡಲಾಗಿದೆ.**

**ಕರ್ನಾಟಕ ಮುಕ್ತ ಶಾಲೆ–ಕೆ.ಓ.ಎಸ್ ಪರೀಕ್ಷೆಯ ಫಲಿತಾಂಶವನ್ನು www.sslc.karnataka.gov.in ಅಂತರ್ಜಾಲದಲ್ಲಿ ದಿನಾಂಕ:01/02/2021 ರಂದು ಮಧ್ಯಾಹ್ನ 3:00 ಗಂಟೆಯ ನಂತರ ಪ್ರಕಟಿಸಲಾಗುವುದು.**

1/2/2021

(ಎಸ್.ಗೀತಾ)
ನಿರ್ದೇಶಕರು
(ಇತರೆ ಪರೀಕ್ಷೆಗಳು)

**ಪ್ರತಿಯನ್ನು:**

1. ರಾಜ್ಯದ ಸಂಬಂಧಿಸಿದ ಡಯಟ್ ಪ್ರಾಂಶುಪಾಲರ ವ್ಯಾಪ್ತಿಗೆ ಸಂಬಂಧಿಸಿದ ಕರ್ನಾಟಕ ಮುಕ್ತ ಶಾಲೆ ಕೆ.ಓ.ಎಸ್ ಕಲಿಕಾ ಕೇಂದ್ರಗಳು ಸಕಾಲದಲ್ಲಿ ಫಲಿತಾಂಶ ಪ್ರಕಟಣೆಯಾಗುವಂತೆ ಕ್ರಮವಹಿಸುವುದು ಹಾಗೂ ನಿಗಾವಹಿಸುವುದು.
2. ನಿರ್ದೇಶಕರು, ಜೆ.ಎಸ್.ಎಸ್ ಕರ್ನಾಟಕ ಮುಕ್ತ ಶಾಲೆ, ಮೈಸೂರು ರವರ ಮಾಹಿತಿಗಾಗಿ ಕಳುಹಿಸಿದೆ.
3. ರಾಜ್ಯದ ಎಲ್ಲಾ ಕೆ.ಓ.ಎಸ್ ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳಿಗೆ.
4. ಕಛೇರಿ ಪ್ರತಿ.